# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 627
2. ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 23-12-2022
4. ಉತ್ತರಿಸುವ ಸಚಿವರು : ಮಾನ್ಯ ಕಾರ್ಮಿಕ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದಲ್ಲಿ ವಿವಿಧ ಉದ್ದಿಮೆ ಮತ್ತು ಇತರೆ ಕ್ಷೇತ್ರಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರಾಗಿ ದುಡಿಯುತ್ತಿರುವ ಎಷ್ಟು ಮಕ್ಕಳನ್ನು (ಬಾಲಕ/ಬಾಲಕಿಯರು) ಕಳೆದ ಮೂರು ವರ್ಷಗಳಲ್ಲಿ ರಕ್ಷಿಸಲಾಗಿದೆ; (ವರ್ಷವಾರು, ಜಿಲ್ಲೆವಾರು ಮಾಹಿತಿ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ಉದ್ದಿಮೆ ಮತ್ತು ಇತರೆ ಕ್ಷೇತ್ರಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರಾಗಿ ದುಡಿಯುತ್ತಿರುವ 1149 ಮಕ್ಕಳನ್ನು ರಕ್ಷಿಸಲಾಗಿದೆ. ಕಳೆದ ಮೂರು ವರ್ಷಗಳ ಜಿಲ್ಲಾವಾರು ವಿವರಗಳನ್ನು **ಅನುಬಂಧದಲ್ಲಿ** ಲಗತ್ತಿಸಿದೆ. |
| ಆ | ರಕ್ಷಿಸಲ್ಪಟ್ಟ ಬಾಲಕಾರ್ಮಿಕ ಮಕ್ಕಳ ಸರ್ವತೋಮುಖ ಅಭಿವೃದ್ಧಿ, ಪುನರ್ವಸತಿಗೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | **ರಾಜ್ಯದಲ್ಲಿ ರಕ್ಷಿಸಲ್ಪಟ್ಟ ಬಾಲಕಾರ್ಮಿಕರ ಮಕ್ಕಳ ಸರ್ವತೋಮುಖ ಅಭಿವೃದ್ಧಿ ಹಾಗೂ ಪುನರ್ವಸತಿಗೆ ಸರ್ಕಾರವು ಈ ಕೆಳಕಂಡ ಪ್ರಮುಖ ಕ್ರಮಗಳನ್ನು ಕೈಗೊಂಡಿರುತ್ತದೆ;**<br>• ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳನ್ನು, ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸ್ಥಾಪಿಸಲಾಗಿರುತ್ತದೆ.<br>• ಸರ್ಕಾರದ ಆದೇಶ ಸಂಖ್ಯೆ: ಎಲ್‌ಡಿ 86 ಸಿಎಲ್‌ಸಿ 2012, ದಿನಾಂಕ: 20-10-2012 ರನ್ವಯ ಬಾಲಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಲಾಗಿರುತ್ತದೆ.<br>• ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆಯಲ್ಲಿ / ದಾಳಿಗಳನ್ನು ನಡೆಸಿ, ತಪಾಸಣೆಗಳಲ್ಲಿ / ದಾಳಿಗಳಲ್ಲಿ ಪತ್ತೆಯಾದ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee) ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ |

| | | |
|---|---|---|
| | | ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡುವ ಕಾರ್ಯಗಳನ್ನು ಮಾಡಲಾಗುತ್ತಿದೆ.<br>• ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕಲಂ–16 ಹಾಗೂ ಕಲಂ–17 ರಡಿಯಲ್ಲಿ ಕಾರ್ಮಿಕ ನಿರೀಕ್ಷಕರುಗಳನ್ನು ಅಧಿಸೂಚಿಸಿ ಹೋಬಳಿ ಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ಬಾಲ್ಯಾವಸ್ಥೆ ಮತ್ತು ಕಿಶೋರವಸ್ಥೆ ಕಾರ್ಮಿಕರ ತಪಾಸಣೆ/ದಾಳಿ ನಡೆಸಲು ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ನಿರಂತರ ದಾಳಿ/ತಪಾಸಣೆಗಳನ್ನು ನಡೆಸುತ್ತಿರುತ್ತಾರೆ. ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರುಗಳು ತಪಾಸಣೆ ನಡೆಸುತ್ತಿದ್ದು, ಕಾಯ್ದೆಯನ್ನು ಉಲ್ಲಂಘಿಸಿರುವ ಮಾಲೀಕರ/ಸಂಸ್ಥೆಗಳ ವಿರುದ್ಧ ಮೊಕದ್ದಮೆ ದಾಖಲಿಸಲಾಗುತ್ತಿದೆ. |
| ಇ | ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುತ್ತಿದ್ದವರ ವಿರುದ್ಧ ಸರ್ಕಾರ ಕೈಗೊಂಡ ಕಠಿಣ ಕ್ರಮಗಳೇನು; ವಿಧಿಸಲಾದ ದಂಡದ ಮೊತ್ತವೆಷ್ಟು; | **ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವವರ ವಿರುದ್ಧ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ(ನಿಷೇದ ಮತ್ತು ನಿಯಂತ್ರಣ) ಕಾಯ್ದೆ, 1986ರಲ್ಲಿ ಪ್ರಮುಖ ಶಿಕ್ಷೆಯ ಪ್ರಾವಧಾನಗಳು ಈ ಕೆಳಕಂಡಂತೆ ಇರುತ್ತವೆ;**<br>• ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ರಂತೆ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ಕೆಲಸಕ್ಕೆ ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ.20,000/–ರಿಂದ ರೂ.50,000/–ಗಳವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ.<br>ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ 465/1986 ರಲ್ಲಿ ನೀಡಿರುವ ನಿರ್ದೇಶನದನ್ವಯ ತಪ್ಪಿತಸ್ಥ ಮಾಲೀಕರು ತಾವು ನಿಯೋಜಿಸಿಕೊಂಡ ಪ್ರತಿ ಮಗುವಿಗೆ ರೂ. 20,000/–ಗಳನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಬೇಕಾಗಿರುತ್ತದೆ.<br>ಈ ಮೇಲ್ಕಂಡ ಶಿಕ್ಷೆಯ ಪ್ರಾವಧಾನಗಳನ್ವಯ ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವವರ ವಿರುದ್ಧ ಸರ್ಕಾರವು ಕ್ರಮಗಳನ್ನು ಕೈಗೊಂಡಿರುತ್ತದೆ. |

| | | |
|---|---|---|
| | | ಬಾಲಕಾರ್ಮಿಕರನ್ನಾಗಿ ದುಡಿಸಿಕೊಳ್ಳುವವರ ವಿರುದ್ಧ ಕಳೆದ ಮೂರು ವರ್ಷಗಳಲ್ಲಿ ರೂ.9,13,800/-ಗಳ ದಂಡವನ್ನು ವಿಧಿಸಲಾಗಿರುತ್ತದೆ. ಸದರಿ ಮೊತ್ತವನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಲಾಗಿರುತ್ತದೆ. |
| ಈ | ರಾಜ್ಯದಲ್ಲಿ ಯಾವುದಾದರೂ ಜಿಲ್ಲೆಯನ್ನು 'ಬಾಲಕಾರ್ಮಿಕ ಮುಕ್ತ ಜಿಲ್ಲೆ' ಎಂದು ಘೋಷಿಸಲಾಗಿದೆಯೇ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ರಾಜ್ಯದ ಯಾವುದೇ ಜಿಲ್ಲೆಯನ್ನು 'ಬಾಲಕಾರ್ಮಿಕ ಮುಕ್ತ ಜಿಲ್ಲೆ' ಎಂದು ಘೋಷಣೆಯಾಗಿರುವುದಿಲ್ಲ. ಬಾಲಕಾರ್ಮಿಕ ಮುಕ್ತ ರಾಜ್ಯವನ್ನಾಗಿ ಘೋಷಣೆ ಮಾಡಲು ಸರ್ಕಾರವು ಈ ಕೆಳಕಂಡ ಕಾರ್ಯಕ್ರಮಗಳನ್ನು ನಿರಂತರವಾಗಿ ಕೈಗೊಂಡಿರುತ್ತದೆ;<br>• ಪ್ರತಿ ಜಿಲ್ಲೆಯಲ್ಲಿ ಕಾಲಕಾಲಕ್ಕೆ ನಿರಂತರವಾದ ಯೋಜಿತ ದೂರು ಆಧಾರಿತ ಹಾಗೂ ಅನಿರೀಕ್ಷಿತ ದಾಳಿಗಳನ್ನು/ತಪಾಸಣೆಗಳನ್ನು ಇಲಾಖೆಯ ಅಧಿಕಾರಿಗಳು ಮತ್ತು ಕಾರ್ಮಿಕ ನಿರೀಕ್ಷಕರು ಮತ್ತು ಕಾಯ್ದೆಯ ಕಲಂ-17ರಡಿ ನೇಮಕಗೊಂಡ ಇತರೆ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ತಂಡದಿಂದ ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ ಅವರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಲಭ್ಯತೆ ಹಾಗೂ ಅವಶ್ಯಕತೆಗನುಗುಣವಾಗಿ ಮಕ್ಕಳ ಕಲ್ಯಾಣ ಸಮಿತಿ (Child Welfare Committee) ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ ಸೇರಿಸಲಾಗಿದೆ. ಹಾಗೂ ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡುವ ಕಾರ್ಯಗಳನ್ನು ಮಾಡಲಾಗುತ್ತಿದೆ.<br>• ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಮುಕ್ತ ಜಿಲ್ಲೆಗಳ ಘೋಷಣೆ ಹೊರಡಿಸಲು ಅವಶ್ಯವಿರುವ *"MEMORANDUM OF STANDARD OPERATING PROCEDURES (MSOPs)" FOR DISTRICT ADMINISTRATION TO DECLARAE A DISTRICT AS "CHILD AND ADOLOSCENT LABOUR FREE ZONE-CALFZ"* ಅನ್ನು ಸಿದ್ಧಪಡಿಸಿ ಜಾರಿಗೆ ತಂದಿದ್ದು, ನಿರಂತರವಾಗಿ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಅನುಷ್ಠಾನಕ್ಕಾಗಿ ಕ್ರಮಕೈಗೊಳ್ಳಲಾಗುತ್ತಿದೆ.<br>• ರಾಜ್ಯಾದ್ಯಂತ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ಸಮೀಕ್ಷೆಯನ್ನು ನಡೆಸುವುದು, ಕಾನೂನು ಅರಿವು-ನೆರವು ಕಾರ್ಯಕ್ರಮಗಳನ್ನು ನಡೆಸುವುದು, ತರಬೇತಿ ಕಾರ್ಯಕ್ರಮಗಳು ಆಯೋಜನೆ, ಜಾಥಾ ಹಾಗೂ ಬೀದಿನಾಟಕಗಳ ಆಯೋಜನೆ, ಗೋಡೆ ಬರಹಗಳನ್ನು |

| | | |
|---|---|---|
| | | ಹಾಗೂ ಸ್ಟಿಕರ್‌ಗಳು ಹಾಗೂ ಕರಪತ್ರಗಳನ್ನು ಹಂಚುವುದು ಮತ್ತು ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿ ಅನುಷ್ಠಾನ ಮಾಡಲಾಗುತ್ತಿದೆ.<br>• ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳನ್ನು ಸ್ಥಾಪಿಸಲಾಗಿದೆ ಹಾಗೂ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿ ಅನುಷ್ಠಾನವನ್ನು ಮಾಡಲಾಗುತ್ತಿದೆ. |

**ಸಂಖ್ಯೆ: ಕಾಇ 51 ಪಿಎಲ್‌ಸಿ 2022**

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ ಸಚಿವರು

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ. ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 436(627)ಕ್ಕೆ ಅನುಬಂಧ

(ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ಉದ್ದಿಮೆ ಮತ್ತು ಇತರೆ ಕ್ಷೇತ್ರಗಳಲ್ಲಿ ರಕ್ಷಿಸಲಾದ ಮಕ್ಕಳ ಜಿಲ್ಲಾವಾರು ವಿವರಗಳು )

| ಕ್ರ.ಸಂ | ಜಿಲ್ಲೆಯ ಹೆಸರು | ರಕ್ಷಿಸಲಾದ ಮಕ್ಕಳ ಸಂಖ್ಯೆ | | | | |
|---|---|---|---|---|---|---|
| | | 2019 | 2020 | 2021 | 2022 | ಒಟ್ಟು |
| 1. | ಬೆಂಗಳೂರು ಗ್ರಾಮಾಂತರ | 07 | 11 | 16 | 35 | 69 |
| 2. | ಬೆಂಗಳೂರು ನಗರ | 11 | 13 | 19 | 39 | 82 |
| 3. | ತುಮಕೂರು | – | – | – | 03 | 03 |
| 4. | ಚಿಕ್ಕಬಳ್ಳಾಪುರ | 05 | 12 | 29 | 41 | 87 |
| 5. | ಕೋಲಾರ | 04 | 02 | 02 | 07 | 15 |
| 6. | ಮೈಸೂರು | 19 | 12 | 10 | 31 | 72 |
| 7. | ಮಂಡ್ಯ | 01 | 02 | 40 | 03 | 46 |
| 8. | ಚಾಮರಾಜನಗರ | 07 | 01 | 05 | 05 | 18 |
| 9. | ಮಂಗಳೂರು | 01 | 04 | 02 | 01 | 08 |
| 10. | ಉಡುಪಿ | – | 02 | 05 | 05 | 12 |
| 11. | ಶಿವಮೊಗ್ಗ | 03 | 02 | 02 | 07 | 14 |
| 12. | ಚಿಕ್ಕಮಂಗಳೂರು | – | – | – | – | – |
| 13. | ಹಾಸನ | 07 | 03 | 06 | 04 | 20 |
| 14. | ಮಡಿಕೇರಿ | 10 | 07 | 14 | 07 | 38 |
| 15. | ಬೆಳಗಾವಿ | 08 | 06 | 34 | 17 | 65 |
| 16. | ವಿಜಯಪುರ | 05 | 03 | 01 | 30 | 39 |
| 17. | ಬಾಗಲಕೋಟೆ | 01 | 01 | 01 | 21 | 24 |
| 18. | ದಾರವಾಡ | – | – | 08 | 04 | 12 |
| 19. | ಗದಗ | 08 | – | 04 | 18 | 30 |
| 20. | ಕಾರವಾರ | – | – | 05 | 08 | 13 |
| 21. | ಹಾವೇರಿ | – | – | – | 10 | 10 |
| 22. | ದಾವಣಗೆರೆ | 05 | 03 | 04 | 04 | 16 |
| 23. | ಬಳ್ಳಾರಿ | 17 | 05 | 04 | 05 | 31 |
| 24. | ಚಿತ್ರದುರ್ಗ | 05 | 06 | 06 | 09 | 26 |
| 25. | ಕಲಬುರ್ಗಿ | 08 | – | 11 | 02 | 21 |
| 26. | ಬೀದರ್ | 12 | 18 | 17 | 15 | 62 |
| 27. | ರಾಯಚೂರು | 01 | 13 | 03 | 04 | 21 |
| 28. | ಕೊಪ್ಪಳ | 82 | 30 | 08 | 12 | 132 |
| 29. | ರಾಮನಗರ | 05 | 07 | 30 | 11 | 53 |
| 30. | ಯಾದಗಿರಿ | 05 | 09 | 29 | 67 | 110 |
| ಒಟ್ಟು | | 237 | 172 | 315 | 425 | 1149 |